# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | 759+760 |
| ಸದಸ್ಯರ ಹೆಸರು | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 13.07.2023 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯ ಮಟ್ಟದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ವಿಸ್ತರಿಸಲು ಇಲಾಖೆ ಅಡಿಯಲ್ಲಿ ಹಮ್ಮಿಕೊಂಡಿರುವ ಯೋಜನೆಗಳು ಕಾರ್ಯಕ್ರಮಗಳು ಯಾವುವು ಮತ್ತು ಈ ಯೋಜನೆಗಳ ಅಡಿಯಲ್ಲಿ ಇದುವರೆವಿಗೂ ಸಾಧಿಸಲಾಗಿರುವ ಪ್ರಗತಿ ಎಷ್ಟು; (ಪೂರ್ಣ ಮಾಹಿತಿ ನೀಡುವುದು)</td><td>ರಾಜ್ಯ ಮಟ್ಟದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನವನ್ನು ವಿಸ್ತರಿಸಲು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಅಡಿಯಲ್ಲಿ ಹಮ್ಮಿಕೊಂಡಿರುವ ಯೋಜನೆಗಳು/ ಕಾರ್ಯಕ್ರಮಗಳ ವಿವರವನ್ನು ಅನುಬಂಧ-1 ರಲ್ಲಿ ಲಗತ್ತಿಸಲಾಗಿದೆ</td></tr>
<tr><td>ಆ)</td><td>ರಾಜ್ಯದಲ್ಲಿ ಈ ಯೋಜನೆಗಳ ಅನುಷ್ಠಾನಕ್ಕೆ ಕೇಂದ್ರದಿಂದ ದೊರೆತಿರುವ ನೆರವು ಮತ್ತು ಬೆಂಬಲಗಳು ಯಾವುವು; (ವರ್ಷವಾರು ಆರ್ಥಿಕ ಮತ್ತು ಭೌತಿಕ ಪ್ರಗತಿ ಒಳಗೊಂಡ ಪೂರ್ಣ ಮಾಹಿತಿ ನೀಡುವುದು)</td><td>ರಾಜ್ಯದಲ್ಲಿ ಈ ಯೋಜನೆಗಳ ಅನುಷ್ಠಾನಕ್ಕೆ ಕೇಂದ್ರದಿಂದ ದೊರೆತಿರುವ ನೆರವು ಮತ್ತು ಬೆಂಬಲಗಳ ವಿವರ ಈ ಕೆಳಕಂಡಂತಿದೆ:
<ul><li>ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ (ಧಾಪ್ರಾವಿಕೇ) ಕೇಂದ್ರ ಸರ್ಕಾರದಿಂದ ದೊರೆತಿರುವ ನೆರವು:</li></ul>
<table>
<tr><th>ಸಾಲು</th><th>ಯೋಜನೆಗಳು</th><th>ಮೊತ್ತ (ರೂ. ಲಕ್ಷಗಳಲ್ಲಿ)</th></tr>
<tr><td>2011-12</td><td>ಪ್ರಾದೇಶಿಕ ವಿಜ್ಞಾನ ಕೇಂದ್ರದ ಸ್ಥಾಪನೆಗೆ</td><td>425.00 (ಯೋಜನ ಅನುಷ್ಠಾನವಾಗಿದೆ)</td></tr>
<tr><td>2019-20 ಮತ್ತು 2022-23</td><td>ಇನ್ನೋವೇಶನ್ ಹಬ್ ಸ್ಥಾಪನೆಗೆ</td><td>67.50 (ಪ್ರಗತಿಯಲ್ಲಿದೆ)</td></tr>
</table>
<ul><li>ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರಕ್ಕೆ ಕೇಂದ್ರ ಸರ್ಕಾರದಿಂದ ದೊರೆತಿರುವ ನೆರವು:</li></ul>
<table>
<tr><th>ಸಾಲು</th><th>ಯೋಜನೆಗಳು</th><th>ಮೊತ್ತ (ರೂ. ಲಕ್ಷಗಳಲ್ಲಿ)</th></tr>
<tr><td>2014-15</td><td>ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರದ ಸ್ಥಾಪನೆಗೆ</td><td>425.00 (ಯೋಜನೆ ಅನುಷ್ಠಾನವಾಗಿದೆ)</td></tr>
</table></td></tr>
</table>

## 5. ಮಿನಿ ವಿಜ್ಞಾನ ಸಂಪನ್ಮೂಲ ಕೇಂದ್ರಗಳ ಸ್ಥಾಪನೆ

ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆ ಮತ್ತು ಚಿಂತನೆಯನ್ನು ಬೆಳೆಸಲು ಹಾಗೂ ವಿದ್ಯಾರ್ಥಿಗಳು ವಿವಿಧ ವೈಜ್ಞಾನಿಕ ತತ್ವಗಳನ್ನು 'ನೋಡಿ ಕಲಿ-ಮಾಡಿ ತಿಳಿ ಪರಿಕಲ್ಪನೆಯಲ್ಲಿ ಸುಲಭವಾಗಿ ಅರ್ಥೈಸಿಕೊಳ್ಳಲು ಅನುವಾಗುವಂತೆ ರಾಜ್ಯದಾದ್ಯಂತ 31 ಮಿನಿ ವಿಜ್ಞಾನ ಸಂಪನ್ಮೂಲ ಕೇಂದ್ರಗಳನ್ನು ಪ್ರೌಢಶಾಲೆಗಳಲ್ಲಿ ಸ್ಥಾಪಿಸಲಾಗಿದೆ.

## 6. ಲ್ಯಾಬ್-ಇನ್-ಎ-ಕಿಟ್ ವಿತರಣೆ

ರಾಜ್ಯದ 169 ಸರ್ಕಾರಿ ಬಾಲಕಿಯರ ಪ್ರೌಢಶಾಲೆಗಳಿಗೆ ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರದಿಂದ ತಯಾರಿಸಲಾದ ಲ್ಯಾಬ್-ಇನ್-ಎ-ಕಿಟ್‌ಗಳನ್ನು ವಿತರಿಸಲಾಗಿದೆ. ಈ ಯೋಜನೆಯ ಪ್ರಮುಖ ಉದ್ದೇಶವೇನೆಂದರೆ, ಪ್ರೌಢಶಾಲಾ ವಿದ್ಯಾರ್ಥಿಗಳು ಲ್ಯಾಬ್-ಇನ್-ಎ-ಕಿಟ್ ಗಳನ್ನು ಬಳಸಿಕೊಂಡು 'ನೋಡಿ ಕಲಿ, ಮಾಡಿ ತಿಳಿ' ಪರಿಕಲ್ಪನೆಯಡಿ ತಾವೇ ಪ್ರಯೋಗಗಳನ್ನು ನಡೆಸುವ ಮುಖಾಂತರ ವೈಜ್ಞಾನಿಕ ತತ್ವಗಳನ್ನು ಅರ್ಥೈಸಿಕೊಳ್ಳುವುದಾಗಿದೆ. ಸದರಿ ಕಿಟ್‌ಗಳು ಜೀವಶಾಸ್ತ್ರ, ರಸಾಯನಶಾಸ್ತ್ರ, ಭೌತಶಾಸ್ತ್ರ ಮತ್ತು ಗಣಿತ ವಿಷಯಕ್ಕೆ ಸಂಬಂಧಿಸಿದ ಪ್ರಯೋಗಗಳನ್ನು ನಡೆಸಲು ಅಗತ್ಯವಾದ ಪರಿಕರಗಳನ್ನು ಒಳಗೊಂಡಿರುತ್ತವೆ.

## 7. ಡಾ|| ಹೆಚ್. ನರಸಿಂಹಯ್ಯ ಅಂತಾರಾಷ್ಟ್ರೀಯ ವಿಜ್ಞಾನ ಕೇಂದ್ರದ ಸ್ಥಾಪನೆ

ವಿದ್ಯಾರ್ಥಿಗಳು ಹಾಗೂ ಜನಸಾಮಾನ್ಯರಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದ ಬೆಳವಣಿಗೆಗಳನ್ನು ಪ್ರಚುರಪಡಿಸಲು ಹಾಗೂ ಶಾಲಾ ಮಕ್ಕಳಲ್ಲಿ ಆವಿಷ್ಕಾರಿಕ ಮನಸ್ಥಿತಿಯನ್ನು ಬೆಳೆಸಲು ಚಟುವಟಿಕೆ ಆಧಾರಿತ ಪರಿಸರವನ್ನು ನಿರ್ಮಿಸಲು ಅನುವಾಗುವಂತೆ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿನ ಹೊಸೂರಿನಲ್ಲಿ ಡಾ|| ಹೆಚ್. ನರಸಿಂಹಯ್ಯ ಅಂತಾರಾಷ್ಟ್ರೀಯ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಲಾಗುತ್ತಿದೆ. ಸದರಿ ಯೋಜನೆಯ ವಿಸ್ತೃತ ಯೋಜನಾ ವರದಿಯನ್ನು ಭಾರತೀಯ ವಿಜ್ಞಾನ ಸಂಸ್ಥೆಯ ಹಿರಿಯ ವಿಜ್ಞಾನಿಗಳಾದ ಪ್ರೊ|| ಕೆ.ಪಿ.ಜೆ. ರೆಡ್ಡಿ ರವರ ಅಧ್ಯಕ್ಷತೆಯ ತಾಂತ್ರಿಕ ಸಮಿತಿಯು ತಯಾರಿಸಿ, ಇಲಾಖೆಗೆ ಸಲ್ಲಿಸಿದೆ.

ಸದರಿ ಯೋಜನೆಯ ಅನುಷ್ಠಾನಕ್ಕೆ ಅನುವಾಗುವಂತೆ ಡಾ. ಹೆಚ್. ಎನ್. ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಹೊಂದಿಕೊಂಡಂತೆ ಒಟ್ಟು 132-23 ಎಕರೆ/ಗುಂಟೆ ಭೂಮಿಯನ್ನು ಜಿಲ್ಲಾಡಳಿತವು ಇಲಾಖೆಗೆ ಮಂಜೂರು ಮಾಡಿರುತ್ತದೆ. ಸರ್ಕಾರದಿಂದ ಬಿಡುಗಡೆಯಾದ ರೂ.10.00 ಕೋಟಿಗಳ ಅನುದಾನವನ್ನು ಯೋಜನೆಯ ಅನುಷ್ಠಾನಕ್ಕಾಗಿ ಚಿಕ್ಕಬಳ್ಳಾಪುರ ಜಿಲ್ಲಾಡಳಿತಕ್ಕೆ ಬಿಡುಗಡೆ ಮಾಡಲಾಗಿದೆ.

## 8. ಬೆಂಗಳೂರು ಇಂಡಿಯಾ ನ್ಯಾನೊ ಸಮ್ಮೇಳನ ಆಯೋಜನೆ

ರಾಜ್ಯದಲ್ಲಿ ನ್ಯಾನೊವಿಜ್ಞಾನ ಹಾಗೂ ನ್ಯಾನೋ ತಂತ್ರಜ್ಞಾನ ಆಧಾರಿತ ಸಂಸ್ಥೆಗಳನ್ನು ಪ್ರೋತ್ಸಾಹಿಸಲು ಬೆಂಗಳೂರು ಇಂಡಿಯಾ ನ್ಯಾನೊ ಅಂತಾರಾಷ್ಟ್ರೀಯ ಸಮ್ಮೇಳನವನ್ನು 2007 ರಿಂದ ಆಯೋಜಿಸಿಕೊಂಡು ಬರಲಾಗುತ್ತಿದೆ. ಸದರಿ ಸಮ್ಮೇಳನದ 12ನೇ ಆವೃತ್ತಿಯನ್ನು ಭಾರತ ರತ್ನ ಪ್ರೊ. ಸಿ.ಎನ್.ಆರ್. ರಾವ್, FRS ರವರ ಮಾರ್ಗದರ್ಶನದಲ್ಲಿ ಮಾರ್ಚ್ 7- 9, 2022 ರಂದು ಬೆಂಗಳೂರಿನಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು. ಸಮ್ಮೇಳನದಲ್ಲಿ ಒಟ್ಟು 99 ಅಂತರಾಷ್ಟ್ರೀಯ ಮತ್ತು ರಾಷ್ಟ್ರೀಯ ಭಾಷಣಕಾರರು 28 ಅಧಿವೇಶನಗಳಲ್ಲಿ ವಿವಿಧ ನ್ಯಾನೊ ವಿಷಯಗಳ ಕುರಿತು ಉಪನ್ಯಾಸಗಳನ್ನು ನೀಡಿರುತ್ತಾರೆ. ಸದರಿ ಸಮ್ಮೇಳನದಲ್ಲಿ 3200 ಕ್ಕೂ ಹೆಚ್ಚು ಪ್ರತಿನಿಧಿಗಳು ವರ್ಚುಯಲ್ ನಲ್ಲಿ ಭಾಗವಹಿಸಿದ್ದರು.

## 9. ಪುನೀತ್ ಉಪಗ್ರಹ ಯೋಜನೆ ಅನುಷ್ಠಾನ

ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಮತ್ತು ಮುಂದುವರಿದ ತಂತ್ರಜ್ಞಾನಗಳ ಬಗ್ಗೆ ಅರಿವು ಮೂಡಿಸಲು ಪುನೀತ್ ಉಪಗ್ರಹ ಯೋಜನೆಯನ್ನು ಇಂಡಿಯನ್ ಟೆಕ್ನಾಲಜಿ ಕಾಂಗ್ರೆಸ್ ಅಸೋಸಿಯೇಷನ್ ಮತ್ತು ಇಸ್ರೋ ಸಂಸ್ಥೆಗಳ ಸಹಯೋಗದಲ್ಲಿ ರೂ.190.00 ಲಕ್ಷಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿ ಬೆಂಗಳೂರು ವಿಭಾಗದ ಪ್ರೌಢಶಾಲಾ ವಿದ್ಯಾರ್ಥಿಗಳ ಮುಖಾಂತರ ಒಂದು ನ್ಯಾನೊ ಉಪಗ್ರಹದ ವಿನ್ಯಾಸ, ಅಭಿವೃದ್ಧಿ ಮತ್ತು ಉಡಾವಣೆಯನ್ನು ಮಾಡಲಾಗುವುದು.

## 10. ಡಿ.ಎಸ್.ಟಿ.- ಪಿಹೆಚ್.ಡಿ. ಶಿಷ್ಯವೇತನ ಯೋಜನೆಯ ಅನುಷ್ಠಾನ

ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿಷಯಗಳಲ್ಲಿ ವಿದ್ಯಾರ್ಥಿಗಳು ಪಿಹೆಚ್.ಡಿ. ಸಂಶೋಧನೆಯನ್ನು ಕೈಗೊಳ್ಳುವಂತೆ ಪ್ರೋತ್ಸಾಹಿಸಲು ಇಲಾಖೆಯು ಆರ್ಥಿಕ ವರ್ಷ 2018-19 ರಿಂದ ಹೊಸ ಯೋಜನೆಯಾಗಿ 'ವಿಜ್ಞಾನ ಮತ್ತು ಇಂಜಿನಿಯರಿಂಗ್ ಪಿಹೆಚ್.ಡಿ. ವಿದ್ಯಾರ್ಥಿಗಳಿಗೆ ಡಿ.ಎಸ್.ಟಿ. ಶಿಷ್ಯವೇತನ' ಎಂಬ ಹೊಸ ಯೋಜನೆಯನ್ನು ಪ್ರಾರಂಭಿಸಿರುತ್ತದೆ. ಸದರಿ ಯೋಜನೆಯಡಿ, ವಿದ್ಯಾರ್ಥಿಗಳಿಗೆ ಮಾಸಿಕವಾಗಿ ರೂ.20,000 ಗಳ ಶಿಷ್ಯವೇತನವನ್ನು ಮೂರು ವರ್ಷಗಳವರೆಗೆ ನೀಡಲಾಗುತ್ತಿದೆ.

## 11. ವಿಜ್ಞಾನ ಪ್ರತಿಭಾ ಶೋಧನೆ ಯೋಜನೆಯ ಅನುಷ್ಠಾನ

ಪದವಿ ಪೂರ್ವ ಶಿಕ್ಷಣದ ಹಂತದಲ್ಲಿಯೇ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ, ಪೋಷಿಸುವ ನಿಟ್ಟಿನಲ್ಲಿ 'ವಿಜ್ಞಾನ ಪ್ರತಿಭಾ ಶೋಧನೆ' ಯೋಜನೆಯನ್ನು 2021-22ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿ ಪ್ರತಿ ವರ್ಷ ಪ್ರತಿ ಜಿಲ್ಲೆಯ 10 ಟಾಪ್ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಒಟ್ಟು 320 ವಿದ್ಯಾರ್ಥಿಗಳಿಗೆ ಪದವಿ ಪೂರ್ವ ಶಿಕ್ಷಣ ಅವಧಿ ಪೂರ್ಣಗೊಳ್ಳುವವರೆಗೂ ತಲಾ ಮಾಸಿಕ ರೂ.1,000/- ಗಳ ಶಿಷ್ಯವೇತನವನ್ನು ನೀಡಲಾಗುತ್ತಿದೆ. ಅಲ್ಲದೆ, ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಿಜ್ಞಾನ ವಿಷಯಗಳಲ್ಲಿ ಮಾರ್ಗದರ್ಶನವನ್ನು ಸಹ ನೀಡಲಾಗುತ್ತಿದೆ.

## 12. ವಿಜ್ಞಾನ ಮಾಲಿಕೆ- 500 ರಡಿಯಲ್ಲಿ ರೇಡಿಯೋ ಸರಣಿ ಕಾರ್ಯಕ್ರಮ ಪ್ರಸಾರ

ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಚಿಂತನೆ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನದ ಬೆಳವಣಿಗೆಗಳನ್ನು ಉತ್ತೇಜಿಸಲು ಅನುವಾಗುವಂತೆ, ಆಕಾಶವಾಣಿ ಬೆಂಗಳೂರು ಸಹಯೋಗದಲ್ಲಿ 'ನಿತ್ಯ ವಿಜ್ಞಾನ' ಎಂಬ ರೇಡಿಯೋ ಸರಣಿ ಕಾರ್ಯಕ್ರಮವನ್ನು ಆಗಸ್ಟ್ 15, 2021 ರಿಂದ ಪ್ರಸಾರ ಮಾಡಲಾಗುತ್ತಿದೆ. ವಿಜ್ಞಾನ ಮತ್ತು ತಂತ್ರಜ್ಞಾನಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಈಗಾಗಲೇ 500ಕ್ಕೂ ಹೆಚ್ಚು ರೇಡಿಯೋ ಕಾರ್ಯಕ್ರಮಗಳು ಪ್ರಸಾರವಾಗಿವೆ.

## 13. ವಿಜ್ಞಾನ ಮತ್ತು ತಂತ್ರಜ್ಞಾನ ದಾರ್ಶನಿಕ ಸಮೂಹದ ಯೋಜನೆಗಳ ಅನುಷ್ಠಾನ

ಸರ್ಕಾರವು ರಾಜ್ಯದ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದ ಮೂಲಭೂತ ಸೌಕರ್ಯಗಳನ್ನು ಬಲವರ್ಧಿಸಲು ಹಾಗೂ ಸಂಶೋಧನೆ ಮತ್ತು ಅಭಿವೃದ್ಧಿಯನ್ನು ಪ್ರೋತ್ಸಾಹಿಸಲು ಭಾರತ ರತ್ನ ಪ್ರೊ. ಸಿ. ಎನ್. ಆರ್. ರಾವ್, ಎಫ್.ಆರ್.ಎಸ್. ರಾಷ್ಟ್ರೀಯ ಸಂಶೋಧನಾ ಪ್ರಾಧ್ಯಾಪಕರು ಹಾಗೂ ಗೌರವಾನ್ವಿತ ಅಧ್ಯಕ್ಷರು, ಜೆ.ಎನ್.ಸಿ.ಎ.ಎಸ್.ಆರ್. ರವರ ಅಧ್ಯಕ್ಷತೆಯಡಿ ವಿಜ್ಞಾನ ಮತ್ತು ತಂತ್ರಜ್ಞಾನ ದಾರ್ಶನಿಕ ಸಮೂಹವನ್ನು (ವಿತಂದಾಸ) 2008 ರಲ್ಲಿ ರಚಿಸಿರುತ್ತದೆ. ಸದರಿ ಯೋಜನೆಯಡಿ, ಕಳೆದ ಮೂರು ವರ್ಷಗಳಲ್ಲಿ ರೂ. 21.34 ಕೋಟಿಗಳನ್ನು 230 ಫಲಾನುಭವಿಗಳಿಗೆ ನೀಡಲಾಗಿದೆ.

## 14. ವಿಜ್ಞಾನ ಜನಸಮೂಹ ಕಾರ್ಯಕ್ರಮಗಳು:

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಂಗಸಂಸ್ಥೆಗಳಾದ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ, ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ, ಜವಾಹರಲಾಲ್ ನೆಹರು ತಾರಾಲಯ ಮತ್ತು ವಿಜ್ಞಾನ ಕೇಂದ್ರಗಳಾದ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ, ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರ ಹಾಗೂ ರಾಯಚೂರು, ಬಳ್ಳಾರಿ, ಬೀದರ್, ಕಾರವಾರ, ಬಾಗಲಕೋಟೆ, ದಾವಣಗೆರೆ, ಕೊಪ್ಪಳ ಮತ್ತು ಡಾ. ಹೆಚ್. ನರಸಿಂಹಯ್ಯ ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳು ಹಾಗೂ ವೈಜ್ಞಾನಿಕ/ಶೈಕ್ಷಣಿಕ ಸಂಸ್ಥೆಗಳ ಸಹಯೋಗದೊಂದಿಗೆ ವಿಜ್ಞಾನ ಚಟುವಟಿಕೆಗಳು, ವಿಜ್ಞಾನ ಮತ್ತು ತಂತ್ರಜ್ಞಾನದ ಪ್ರಚಾರಕ್ಕಾಗಿ ಹಾಗೂ ಉತ್ತೇಜನಕ್ಕಾಗಿ ಸಮ್ಮೇಳನಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು, ವಿಜ್ಞಾನ ರಸಪ್ರಶ್ನೆ, ಉಪನ್ಯಾಸ ಸರಣಿಗಳು, ಆಕಾಶ ವೀಕ್ಷಣೆಗಳು ಮತ್ತು ವಿಜ್ಞಾನ ಪ್ರದರ್ಶನಗಳಂತಹ ಹೆಚ್ಚಿನ ಸಂಖ್ಯೆಯ ವೈಜ್ಞಾನಿಕ ಮತ್ತು ಶೈಕ್ಷಣಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

## 15. ಸಂಶೋಧನೆ, ಅಭಿವೃದ್ಧಿ ಹಾಗೂ ನಾವಿನ್ಯತಾ ನೀತಿ

ಕರ್ನಾಟಕ ರಾಜ್ಯಕ್ಕಾಗಿ ಹೊಸ ಸಂಶೋಧನೆ ಮತ್ತು ಅಭಿವೃದ್ಧಿ (ಆರ್&ಡಿ) ನೀತಿಯನ್ನು ಪ್ರೊ. ಅಶೋಕ್ ಶೆಟ್ಟರ್, ಉಪ-ಕುಲಪತಿಗಳು, ಕೆ.ಎಲ್.ಇ. ವಿಶ್ವವಿದ್ಯಾಲಯ, ಹುಬ್ಬಳ್ಳಿ ಇವರ ಅಧ್ಯಕ್ಷತೆಯಲ್ಲಿ ಸರ್ಕಾರದಿಂದ ರಚಿಸಲಾದ ತಜ್ಞ ಸಮಿಯು ತಯಾರಿಸಲಾಗಿದ್ದು, ಸದರಿ ನೀತಿಯನ್ನು ಸನ್ಮಾನ್ಯ ಮುಖ್ಯಮಂತ್ರಿಗಳು 2022ನೇ ಸಾಲಿನಲ್ಲಿ ಬಿಡುಗಡೆಗೊಳಿಸಿರುತ್ತಾರೆ. ಪ್ರಸ್ತುತದಲ್ಲಿ ಮಂಡಿಸಿರುವ 2023-24ನೇ ಸಾಲಿನಲ್ಲಿ ಆಯವ್ಯಯದಲ್ಲಿ ಸದರಿ ನೀತಿಯಲ್ಲಿ ಪ್ರಸ್ತಾಪಿಸಲಾಗಿರುವ ಆಯ್ದ ಯೋಜನೆ/ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಘೋಷಿಸಲಾಗಿರುತ್ತದೆ.

*****